# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಕೇಶವ ಸಣ್ಣಯ್ಯ ನಾಯ್ಕ ಸದಸ್ಯರು, ಬಳಕೂರು ಗ್ರಾಮ ಪಂಚಾಯಿತಿ, ಹೊನ್ನಾವರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ರವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 1135 ಗ್ರಾಪಂಅ 2018, ದಿನಾಂಕ:02.02.2019.
2) ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 62 ಗ್ರಾಪಂಅ 2019, ದಿನಾಂಕ:15.02.2019.
3) ವಿಚಾರಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಇವರ ಪತ್ರ ಸಂಖ್ಯೆ: ಕಂ/ಪ್ರಾಆಬೆ/ಜಿಪಂ/43(ಎ)/ಸಿಆರ್-07/2018-19, ದಿನಾಂಕ:01.01.2020.

**ಪ್ರಸ್ತಾವನೆ:**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು 48(4) ಮತ್ತು 48(5) ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರುಗಳ ಮೇಲೆ ದಾಖಲಾಗುವ ದೂರುಗಳಿಗೆ ಸಂಬಂಧಿಸಿದಂತೆ ಅರೆನ್ಯಾಯಿಕ ಮಾದರಿಯಲ್ಲಿ ವಿಚಾರಣೆ ನಡೆಸುವ ಅಧಿಕಾರವನ್ನು ಸಂಬಂಧಿಸಿದ ಕಂದಾಯ ವಿಭಾಗಗಳ ಪ್ರಾದೇಶಿಕ ಆಯುಕ್ತರುಗಳಿಗೆ ಮೇಲೆ ಓದಲಾದ ಕ್ರಮಾಂಕ (1) ಮತ್ತು (2)ರ ದಿನಾಂಕ:02.02.2019 ರಲ್ಲಿ ವಹಿಸಿ, ಸರ್ಕಾರವು ಆದೇಶಿದೆ.

ಮೇಲೆ (3)ರಲ್ಲಿ ಓದಲಾದ ಪತ್ರದಲ್ಲಿ ಶ್ರೀ ಕೇಶವ ಸಣ್ಣಯ್ಯ ನಾಯ್ಕ ಸದಸ್ಯರು, ಬಳಕೂರು ಗ್ರಾಮ ಪಂಚಾಯಿತಿ, ಹೊನ್ನಾವರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ರವರ ವಿರುದ್ಧದ ಆರೋಪಗಳ ಬಗ್ಗೆ ವಿಚಾಣೆ ನಡೆಸಲು ದಿನಾಂಕ:07-09-2019 ಹಾಗೂ 05.10.20198ರಂದು ವಿಚಾರಣೆಯನ್ನು ನಿಗಧಿಪಡಿಸಿ ಜರೂರು ಕೆಲಸದಲ್ಲಿ ನಿರತರಾಗಿದ್ದ ಕಾರಣ ವಿಚಾರಣೆಯನ್ನು ಮುಂದೂಡಿ ದಿನಾಂಕ:22.11.2019ರಂದು ಜರುಗಿಸಲಾಗಿರುತ್ತದೆ. ವಿಚಾಣಾ ಸಮಯದಲ್ಲಿ ವಾದಿ ಮತ್ತು ಪ್ರಾತಿವಾದಿಗಳ ವಾದ ವಿವಾದಗಳನ್ನು ಆಲಿಸಿ, ಅವರು ಸಲ್ಲಿಸಿದ ಲಿಖಿತ ಹೇಳಿಕೆಯನ್ನು ಹಾಗೂ ಪ್ರಕರಣಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಲಾಗಿ ಶ್ರೀ ಕೇಶವ ಸಣ್ಣಯ್ಯ ನಾಯ್ಕ ಸದಸ್ಯರು, ಬಳಕೂರು ಗ್ರಾಮ ಪಂಚಾಯಿತಿ,ರವರು 2017ರ ಮೇ ತಿಂಗಳಿನಿಂದ ಇಲ್ಲಿಯವರೆಗೆ ಗ್ರಾಮ ಪಂಚಾಯಿತಿಯ ಯಾವುದೆ ಸಾಮಾನ್ಯ ಸಭೆಗೆ ಹಾಜರಾಗಿರುವುದಿಲ್ಲ. ಸದರಿ ಪ್ರಕರಣದ ವಿಚಾರಣೆಗೆ ಸಹ ಗೈರು ಹಾಜರಾಗಿರುತ್ತಾರೆ. ಮೇಲಿನ ಎಲ್ಲಾ ಅಂಶಗಳನ್ನು ಪರಿಶೀಲಿಸಲಾಗಿ ಸದಸ್ಯರ ವಿರುದ್ಧ ಮಾಡಲಾದ ಆರೋಪಗಳು ಸಾಬಿತಾಗಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ)(i)(iii)ರಡಿ ಗ್ರಾಮ ಪಂಚಾಯಿತಿ ಸದಸ್ಯತ್ವದಿಂದ ತೆಗೆದು ಹಾಕಲು ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ರವರು ಶಿಫಾರಸ್ಸು ಮಾಡಿರುತ್ತಾರೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪರಿಶೀಲಿಸಲಾಗಿ, ಶ್ರೀ ಕೇಶವ ಸಣ್ಣಯ್ಯ ನಾಯ್ಕ ಸದಸ್ಯರು, ಬಳಕೂರು ಗ್ರಾಮ ಪಂಚಾಯಿತಿ, ಹೊನ್ನಾವರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ರವರು 2017 ಮೇ ತಿಂಗಳಿನಿಂದ ಇಲ್ಲಿಯ ವರೆಗೂ ಗ್ರಾಮ ಪಂಚಾಯಿತಿಯ ಯಾವುದೇ ಸಾಮಾನ್ಯ ಸಭೆಗೆ ಹಾಜರಾಗಿರುವುದಿಲ್ಲ ಸದರಿ ಪ್ರಕರಣದ ವಿಚಾರಣೆಗೂ ಸಹ ಸದಸ್ಯರು ಗೈರು ಹಾಜರಾಗಿರುತ್ತಾರೆ. ಆದುದರಿಂದ ಇವರ ಸದಸ್ಯತ್ವವನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ 43(ಎ)(i)(iii) ರಡಿಯಲ್ಲಿ ಗ್ರಾಮ ಪಂಚಾಯಿತಿ ಸದಸಯತ್ವದಿಂದ ತೆಗೆದು ಹಾಕಲು ಸರ್ಕಾರವು ತೀರ್ಮಾನಿಸಿದೆ.

ಆದರಂತೆ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/75/ಗ್ರಾಪಂಅ/2020**

**ಬೆಂಗಳೂರು, ದಿನಾಂಕ:-25.02.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಶ್ರೀ ಕೇಶವ ಸಣ್ಣಯ್ಯ ನಾಯ್ಕ ಸದಸ್ಯರು, ಬಳಕೂರು ಗ್ರಾಮ ಪಂಚಾಯಿತಿ, ಹೊನ್ನಾವರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ವಿರುದ್ಧ ಮಾಡಲಾಗಿರುವ

...2

ಆರೋಪಗಳು ಸಾಬಿತಾಗಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ)(i)(iii)ರಡಿ ಸದರಿ ಗ್ರಾಮ ಪಂಚಾಯಿತಿ ಸದಸ್ಯತ್ವದಿಂದ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 25/02/2020.
(ನವೀನ್ ಕುಮಾರ್. ಬಿ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

25.2.2020

**ಗೆ,**

1. ವಿಚಾರಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು ಬೆಳಗಾವಿ ವಿಭಾಗ, ಬೆಳಗಾವಿ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉತ್ತರ ಕನ್ನಡ.
3. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹೊನ್ನಾವರ, ಉತ್ತರ ಕನ್ನೆ ಜಿಲ್ಲೆ.
4. ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಬಳಕೂರು ಗ್ರಾಮ ಪಂಚಾಯಿತಿ, ಹೊನ್ನಾವರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ. **(ಪ್ರಕರಣಕ್ಕೆ ಸಂಬಂಧಿಸಿದ ರವರಿಗೆ ಈ ಆದೇಶ ಜಾರಿಮಾಡಿ, ಸ್ವೀಕೃತಿ ಪಡೆದು ಸರ್ಕಾರಕ್ಕೆ ಸಲ್ಲಿಸಲು ಸೂಚಿಸಿದೆ).**
5. ಶ್ರೀ ಕೇಶವ ಸಣ್ಣಯ್ಯ ನಾಯ್ಕ ಅಂದಿನ ಸದಸ್ಯರು, ಬಳಕೂರು ಗ್ರಾಮ ಪಂಚಾಯಿತಿ, ಹೊನ್ನಾವರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ.
6. ಶಾಖಾ ರಕ್ಷಾ ಕಡತ/ಗಣಕಕೋಶ/ಹೆಚ್ಚುವರಿ/ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.